ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಟ್ರಾಫಿಕ್ ಪೊಲೀಸ್ ಓಡಿ ಬಂದು ಅಡ್ಡ ಹಾಕಿ ವಾಹನ ಸವಾರರಿಗೆ ತೊಂದರೆ ನೀಡುತ್ತಿರುವ ಕುರಿತು

ಶ್ರೀಹೆಚ್.ಎಂ.ರಮೇಶ್‌ಗೌಡ(ವಿಧಾನಸಭೆಯಿಂದಚುನಾಯಿತರಾದವರು):-

774 (995) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ಎಲ್ಲೆಂದರಲ್ಲಿ ಟ್ರಾಫಿಕ್ ಪೊಲೀಸರು ಓಡಿ ಬಂದು ರಸ್ತೆ ಮಧ್ಯೆ ವಾಹನಗಳಿಗೆ ಅಡ್ಡ ಹಾಕುವುದರಿಂದ ವಾಹನ ಸವಾರರಲ್ಲಿ ಭಯ ಹುಟ್ಟಿ ಅನಾಹುತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಾಹನ ಸವಾರರಿಗೆ ತೊಂದರೆಯಾಗದಂತೆ ಸರ್ಕಾರವು ಕೈಗೊಂಡ ಸೂಕ್ತ ಕ್ರಮಗಳೇನು ;

(ಇ) ವಾಹನ ಸವಾರರಲ್ಲಿ ಟ್ರಾಫಿಕ್ ಪೊಲೀಸರ ವಿಷಯವಾಗಿ ಭಯದ ವಾತಾವರಣವನ್ನು ತೆಗೆದು ಹಾಕಲು ಸರ್ಕಾರವು ತೆಗೆದುಕೊಂಡ ಸೂಕ್ತ ನಿರ್ಣಯಗಳು ಯಾವುವು ;

(ಈ) ಬೆಂಗಳೂರು ನಗರದ ಹಲವೆಡೆ ನೋ ಪಾರ್ಕಿಂಗ್ ಬೋರ್ಡ್ ಹಾಕದೇ ಸಾರ್ವಜನಿಕರಿಗೆ ಸರಿಯಾಗಿ ಮಾಹಿತಿ ನೀಡದೆ, ಇದ್ದಕ್ಕಿದ್ದ ಹಾಗೆ ವಾಹನಗಳನ್ನು ಟೋಯಿಂಗ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೆಲವೊಮ್ಮೆ ಪಾರ್ಕಿಂಗ್ ಜಾಗದಲ್ಲಿ ವಾಹನಗಳನ್ನು ನಿಲ್ಲಿಸಿದ್ದರೂ ಸಹ ವಾಹನಗಳ ಟೋಯಿಂಗ್ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಟೋವಿಂಗ್ ವಾಹನದ, ಟ್ರಾಫಿಕ್ ಪೊಲೀಸ್ ಅಧಿಕಾರಿಗಳು ಇಲ್ಲದೆ ಇರುವಾಗಲೂ ಸಹ ಎಲ್ಲೆಂದರಲ್ಲಿ ಟೋವಿಂಗ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಊ) ಹಾಗಿದ್ದಲ್ಲಿ, ಅಧಿಕಾರಿಗಳಿಗೆ ಈ ಸಂಬಂಧ ಸೂಕ್ತ ರೀತಿಯಲ್ಲಿ ಸಲಹೆ ಸೂಚನೆಗಳನ್ನು ನೀಡುವಲ್ಲಿ ಸರ್ಕಾದಿಂದ ಉನ್ನತ ಮಟ್ಟದ ಸಭೆಗಳು ನಡೆದಿವೆಯೇ ?